All India Radio: Bangalore

National Bulletin In Kannada

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

26.12.2025 19.35 p.m.

***************

ಮುಖ್ಯಾಂಶಗಳು

- ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಂದ ಕ್ರಿಕೆಟರ್ ವೈಭವ್ ಸೂರ್ಯವಂಶಿ ಸೇರಿ ೨೦ ಮಕ್ಕಳಿಗೆ ಪ್ರಧಾನಮಂತ್ರಿ ಬಾಲ ಪುರಸ್ಕಾರ ಪ್ರದಾನ
- ಅಭಿವೃದ್ಧಿ ಹೊಂದಿದ ಭಾರತ ನಿರ್ಮಾಣಕ್ಕೆ ಜನ್ ಝೆಡ್, ಜನ್ ಆಲ್ಫಾ ಪೀಳಿಗೆ ಪ್ರಮುಖ ಪಾತ್ರ - ಪ್ರಧಾನಿ ನರೇಂದ್ರ ಮೋದಿ ಅಭಿಮತ
- ಎಚ್೧-ಬಿ ವೀಸಾ; ಸಮಸ್ಯೆ ನಿವಾರಣೆಗೆ ಅಮೆರಿಕಾ ಅಧಿಕಾರಿಗಳೊಂದಿಗೆ ಮಾತುಕತೆ - ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್
- ಮಹಿಳಾ ಟಿ-೨೦ ಕ್ರಿಕೆಟ್; ಶ್ರೀಲಂಕಾ ವಿರುದ್ಧ ಟಾಸ್ ಗೆದ್ದ ಭಾರತ ಫೀಲ್ಡಿಂಗ್ ಆಯ್ಕೆ

***************

ವೀರ್ ಬಾಲ್ ದಿವಸ್ ಅಂಗವಾಗಿ ನವದೆಹಲಿಯಲ್ಲಿಂದು ನಡೆದ ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಪ್ರಧಾನಮಂತ್ರಿ ರಾಷ್ಟ್ರೀಯ ಬಾಲ ಪುರಸ್ಕಾರ ಪ್ರದಾನ ಮಾಡಿದರು.

ಈ ವರ್ಷ, ಅತ್ಯುತ್ತಮ ಸಾಧನೆಗಳನ್ನು ಮಾಡಿದ ೧೮ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ೨೦ ಮಕ್ಕಳಿಗೆ ಪ್ರಶಸ್ತಿ ನೀಡಲಾಗಿದೆ. ಈ ಪೈಕಿ ಕ್ರಿಕೆಟ್ ಕ್ಷೇತ್ರದ ಉದಯೋನ್ಮುಖ ತಾರೆ, ೧೪ ವರ್ಷದ ವೈಭವ್ ಸೂರ್ಯವಂಶಿ ಪ್ರಶಸ್ತಿ ಸ್ವೀಕರಿಸಿದ ಪ್ರಮುಖರಾಗಿದ್ದಾರೆ.

ಈ ಸಂದರ್ಭದಲ್ಲಿ ಮಾತನಾಡಿದ ರಾಷ್ಟ್ರಪತಿ, ಈ ಪ್ರಶಸ್ತಿ ದೇಶಾದ್ಯಂತದ ಮಕ್ಕಳಿಗೆ ಸ್ಫೂರ್ತಿ ನೀಡುತ್ತದೆ. ಪ್ರಶಸ್ತಿ ಪುರಸ್ಕೃತ ಮಕ್ಕಳು ಶೌರ್ಯ, ಕಲೆ, ಸಂಸ್ಕೃತಿ, ಪರಿಸರ, ನಾವೀನ್ಯತೆ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಅಸಾಧಾರಣ ಕೊಡುಗೆಗಳನ್ನು ನೀಡಿದ್ದಾರೆ ಎಂದು ಹೇಳಿದ್ದಾರೆ.

***************

ಯುವ ಸಬಲೀಕರಣ ಮತ್ತು ಯುವಜನರನ್ನು ರಾಷ್ಟ್ರ ನಿರ್ಮಾಣದತ್ತ ಕೊಂಡೊಯ್ಯುವ ಗುರಿಯೊಂದಿಗೆ ನೂತನ ನೀತಿಗಳನ್ನು ರೂಪಿಸಲಾಗುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ನವದೆಹಲಿಯ ಭಾರತ ಮಂಟಪಂನಲ್ಲಿಂದು ನಡೆದ ವೀರ ಬಾಲ ದಿವಸ್ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಪ್ರಧಾನಿ, ಜನ್ ಝೆಡ್ ಮತ್ತು ಜನ್ ಆಲ್ಫಾ ಪೀಳಿಗೆ ದೇಶವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವಾಗುವ ಗುರಿಯತ್ತ ಕೊಂಡೊಯ್ಯುತ್ತಾರೆ ಎಂದು ಆಶಾವಾದ ವ್ಯಕ್ತಪಡಿಸಿದರು.

ಬಾಹ್ಯಾಕಾಶ, ಕ್ರೀಡೆ, ಫಿನ್‌ಟೆಕ್, ಉತ್ಪಾದನೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸರ್ಕಾರ ತೆಗೆದುಕೊಳ್ಳುವ ಪ್ರತಿಯೊಂದು ಉಪಕ್ರಮಗಳಲ್ಲಿಯೂ ಯುವಕರು ಪ್ರಮುಖ ಪಾತ್ರ ವಹಿಸುತ್ತಾರೆ. ಮೇರಾ ಯುವ ಭಾರತ್ ಉಪಕ್ರಮದಡಿಯಲ್ಲಿ ಯುವಕರನ್ನು ಸಂಪರ್ಕಿಸಲು ಮತ್ತು ನಾಯಕತ್ವ ಕೌಶಲ್ಯಗಳ ಅಭಿವೃದ್ಧಿಯೊಂದಿಗೆ ಅವರಿಗೆ ಅವಕಾಶಗಳನ್ನು ಒದಗಿಸಲು ಪ್ರಯತ್ನಗಳನ್ನು ಮಾಡಲಾಗುತ್ತಿದೆ ಎಂದು ಅವರು ತಿಳಿಸಿದರು.

ಪ್ರತಿಯೊಂದು ವಲಯದಲ್ಲೂ ಯುವಕರಿಗೆ ಹೊಸ ಅವಕಾಶಗಳು ತೆರೆದುಕೊಳ್ಳುತ್ತಿವೆ. ತಮ್ಮ ಪ್ರತಿಭೆ, ವಿಶ್ವಾಸ, ನಾಯಕತ್ವವನ್ನು ಬಳಸಿಕೊಳ್ಳಲು ಉತ್ತಮ ಅವಕಾಶಗಳನ್ನು ಒದಗಿಸಲು ಸರ್ಕಾರ ಬದ್ಧವಾಗಿದೆ. ಶಿಕ್ಷಣ ನೀತಿಯಲ್ಲಿನ ಗಮನಾರ್ಹ ಸುಧಾರಣೆಗಳ ಮೂಲಕ ಅಭಿವೃದ್ಧಿ ಹೊಂದಿದ ಭಾರತಕ್ಕೆ ಬಲವಾದ ಅಡಿಪಾಯ ಹಾಕಲಾಗುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

***************

ಎಚ್೧-ಬಿ ವೀಸಾಗಳನ್ನು ಹೊಂದಿರುವ ಭಾರತೀಯ ಪ್ರಜೆಗಳಿಗೆ ಉಂಟಾಗುವ ಅಡೆತಡೆಗಳನ್ನು ಪರಿಹರಿಸಲು ಅಮೆರಿಕಾದೊಂದಿಗೆ ಭಾರತ ಸಕ್ರಿಯವಾಗಿ ತೊಡಗಿಕೊಂಡಿದೆ ಎಂದು ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ತಿಳಿಸಿದ್ದಾರೆ.

ಈ ಕುರಿತು ನವದೆಹಲಿಯಲ್ಲಿ ಸುದ್ದಿಗಾರರಿಗೆ ಮಾಹಿತಿ ನೀಡಿದ ಅವರು, ಅಮೆರಿಕಾ ವೀಸಾಗಾಗಿ ಸಮಯ ನಿಗದಿಪಡಿಸುವಲ್ಲಿ ಆಗುತ್ತಿರುವ ವಿಳಂಬ ಮತ್ತು ತೊಂದರೆಗಳನ್ನು ಎದುರಿಸುತ್ತಿರುವ ಭಾರತೀಯ ಪ್ರಜೆಗಳಿಂದ ಸರ್ಕಾರ ಅನೇಕ ಅರ್ಜಿಗಳನ್ನು ಸ್ವೀಕರಿಸಿದೆ ಎಂದು ಹೇಳಿದರು.

ವಿಳಂಬದಿಂದಾಗಿ ಎಚ್೧-ಬಿ ವೀಸಾ ಅವಲಂಬಿತ ವ್ಯಕ್ತಿಗಳು ಮತ್ತು ಅವರ ಕುಟುಂಬಗಳಿಗೆ ಶಿಕ್ಷಣ ಸೇರಿದಂತೆ ವಿವಿಧ ರೀತಿಯಲ್ಲಿ ಅಡ್ಡಿಯಾಗುತ್ತಿದೆ. ಈ ಕುರಿತು ನವದೆಹಲಿ ಮತ್ತು ವಾಷಿಂಗ್ಟನ್ ಡಿಸಿಯಲ್ಲಿರುವ ಅಮೆರಿಕಾದ ಅಧಿಕಾರಿಗಳೊಂದಿಗೆ ಚರ್ಚಿಸಲಾಗಿದೆ ಎಂದು ಅವರು ತಿಳಿಸಿದರು.

ಇದೇ ವೇಳೆ, ಬಾಂಗ್ಲಾದೇಶದ ಮೈಮೆನ್ಸಿಂಗ್ ನಗರದಲ್ಲಿ ಇತ್ತೀಚೆಗೆ ಹಿಂದೂ ಯುವಕನ ಹತ್ಯೆಯನ್ನು ಖಂಡಿಸಿದ ರಣಧೀರ್ ಜೈಸ್ವಾಲ್, ಈ ಪ್ರಕರಣದಲ್ಲಿ ಭಾಗಿಯಾಗಿರುವ ಅಪರಾಧಿಗಳ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿದರು.

ಬಾಂಗ್ಲಾದೇಶದ ಮಧ್ಯಂತರ ಸರ್ಕಾರದ ಅವಧಿಯಲ್ಲಿ ಹತ್ಯೆ, ಬೆಂಕಿ ಹಚ್ಚುವಿಕೆ, ಭೂಕಬಳಿಕೆ ಸೇರಿದಂತೆ ಅಲ್ಪಸಂಖ್ಯಾತರ ವಿರುದ್ಧ ೨ ಸಾವಿರದ ೬೦೦ಕ್ಕೂ ಹೆಚ್ಚು ಹಿಂಸಾಚಾರ ಪ್ರಕರಣಗಳು ದಾಖಲಾಗಿವೆ ಎಂದು ಅವರು ಮಾಹಿತಿ ನೀಡಿದರು.

***************

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ನಾಳೆಯಿಂದ ಕರ್ನಾಟಕ, ಗೋವಾ ಮತ್ತು ಜಾರ್ಖಂಡ್‌ಗೆ ನಾಲ್ಕು ದಿನಗಳ ಭೇಟಿ ನೀಡಲಿದ್ದಾರೆ.

ರಾಷ್ಟ್ರಪತಿ ಅವರು ನಾಳೆ ಸಂಜೆ ಗೋವಾಕ್ಕೆ ತೆರಳಲಿದ್ದಾರೆ. ಇದೇ ೨೮ ರಂದು ಕರ್ನಾಟಕದ ಕಾರವಾರ ಬಂದರಿನಿಂದ ಜಲಾಂತಾರ್ಗಾಮಿ ನೌಕೆಯಲ್ಲಿ ಪ್ರಯಾಣಿಸಲಿದ್ದಾರೆ. ಬಳಿಕ ಇದೇ ೨೯ ರಂದು ಜಾರ್ಖಂಡ್‌ನ ಜಮ್‌ಶಡ್‌ಪುರದಲ್ಲಿ ನಡೆಯಲಿರುವ ಓಲ್ ಚಿಕಿ ಶತಮಾನೋತ್ಸವ ಸಮಾರಂಭದಲ್ಲಿ ರಾಷ್ಟ್ರಪತಿ ಅವರು ಭಾಗವಹಿಸಲಿದ್ದಾರೆ.

ಅದೇ ದಿನ ಅವರು, ಜಮ್‌ಶಡ್‌ಪುರದ ರಾಷ್ಟ್ರೀಯ ತಂತ್ರಜ್ಞಾನ ಸಂಸ್ಥೆಯ-ಎನ್‌ಐಟಿ ೧೫ನೇ ಘಟಿಕೋತ್ಸವ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ. ಇದೇ ೩೦ ರಂದು ಅವರು ದುಮ್ಲಾದಲ್ಲಿ ನಡೆಯುವ ಅಂತಾರಾಜ್ಯ ಜನಸಾಂಸ್ಕೃತಿಕ ಸಮಾಗಮದ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

***************

ಮೂರು ದಿನಗಳ ಪ್ರಧಾನ ಕಾರ್ಯದರ್ಶಿಗಳ ಐದನೇ ರಾಷ್ಟ್ರೀಯ ಸಮ್ಮೇಳನ ನವದೆಹಲಿಯಲ್ಲಿಂದು ಆರಂಭವಾಗಿದೆ.

ನಾಳೆ ಮತ್ತು ನಾಡಿದ್ದು ಪ್ರಧಾನಿ ನರೇಂದ್ರ ಮೋದಿ ಸಮ್ಮೇಳನದ ಅಧ್ಯಕ್ಷತೆ ವಹಿಸಲಿದ್ದಾರೆ. ರಾಷ್ಟ್ರೀಯ ಅಭಿವೃದ್ಧಿ ಆದ್ಯತೆಗಳ ಕುರಿತು ರಚನಾತ್ಮಕ ಮತ್ತು ನಿರಂತರ ಸಂವಾದದ ಮೂಲಕ ಕೇಂದ್ರ - ರಾಜ್ಯ ಪಾಲುದಾರಿಕೆಯನ್ನು ಬಲಪಡಿಸುವಲ್ಲಿ ಈ ಸಮ್ಮೇಳನ ಮತ್ತೊಂದು ಪ್ರಮುಖ ಮೈಲಿಗಲ್ಲನ್ನು ಗುರುತಿಸುತ್ತದೆ.

ಈ ಸಮ್ಮೇಳನ, ಕೇಂದ್ರ ಮತ್ತು ರಾಜ್ಯಗಳು ಸಹಕರಿಸುವ ವೇದಿಕೆಯಾಗಿ ಕಾರ್ಯನಿರ್ವಹಿಸುತ್ತದೆ. ಅಲ್ಲದೇ, ಭಾರತದ ಮಾನವ ಬಂಡವಾಳ ಸಾಮರ್ಥ್ಯವನ್ನು ಹೆಚ್ಚಿಸಲು ಮತ್ತು ಸಮಗ್ರ, ಭವಿಷ್ಯಕ್ಕೆ ಸಿದ್ಧವಾದ ಬೆಳವಣಿಗೆಯನ್ನು ವೇಗಗೊಳಿಸಲು ಏಕೀಕೃತ ಮಾರ್ಗಸೂಚಿಯನ್ನು ವಿನ್ಯಾಸಗೊಳಿಸುತ್ತದೆ.

ಸಾಮಾನ್ಯ ಅಭಿವೃದ್ಧಿ ಕಾರ್ಯಸೂಚಿಯನ್ನು ಅಂತಿಮಗೊಳಿಸುವ ಗುರಿಯನ್ನು ಹೊಂದಿರುವ ತೀವ್ರವಾದ ಚರ್ಚೆಗಳಿಗೆ ಸಮ್ಮೇಳನ ವೇದಿಕೆ ಒದಗಿಸುತ್ತದೆ. ರಾಜ್ಯಗಳು ಮತ್ತು ಕೇಂದ್ರಾಡಳಿತ

ಪ್ರದೇಶಗಳು ಅನುಸರಿಸಬೇಕಾದ ಉತ್ತಮ ಅಭ್ಯಾಸಗಳು ಮತ್ತು ತಂತ್ರಗಳನ್ನು ಒಳಗೊಂಡ "ವಿಕಸಿತ ಭಾರತಕ್ಕಾಗಿ ಮಾನವ ಬಂಡವಾಳ" ಎಂಬ ವಿಷಯದ ಮೇಲೆ ಸಮ್ಮೇಳನವು ಗಮನಹರಿಸುತ್ತದೆ.

***************

ವೇಗವಾಗಿ ಬೆಳೆಯುತ್ತಿರುವ ಪ್ರಯಾಣಿಕರ ಬೇಡಿಕೆಯನ್ನು ಪೂರೈಸಲು ೨೦೩೦ರ ವೇಳೆಗೆ ದೇಶದ ೪೮ ಪ್ರಮುಖ ನಗರಗಳಲ್ಲಿ ರೈಲುಗಳ ಮೂಲ ಸಾಮರ್ಥ್ಯವನ್ನು ದ್ವಿಗುಣಗೊಳಿಸಲು ಭಾರತೀಯ ರೈಲ್ವೆ ಮುಂದಾಗಿದೆ.

ಈ ನಗರಗಳಲ್ಲಿ ಬೆಂಗಳೂರು, ದೆಹಲಿ, ಮುಂಬೈ, ಕೊಲ್ಕತ್ತಾ, ಚನ್ನೈ, ಹೈದರಾಬಾದ್, ಪಾಟ್ನಾ, ಭೋಪಾಲ್ ಮತ್ತು ಪುರಿ ಸೇರಿವೆ. ಇದು ಮುಂಬರುವ ವರ್ಷಗಳಲ್ಲಿ ಸಂಚಾರ ಅಗತ್ಯವನ್ನು ಹಂತ-ಹಂತವಾಗಿ ಪೂರೈಸಲು ಸಹಾಯ ಮಾಡುತ್ತದೆ ಎಂದು ರೈಲ್ವೆ ಸಚಿವಾಲಯ ತಿಳಿಸಿದೆ.

ಈ ಕುರಿತು ರೈಲ್ವೆ ಮಂಡಳಿಯ ಅಧ್ಯಕ್ಷ ಸತೀಶ್ ಕುಮಾರ್ ಅವರು, ಎಲ್ಲಾ ವಲಯ ರೈಲ್ವೆಗಳ ಪ್ರಧಾನ ವ್ಯವಸ್ಥಾಪಕರಿಗೆ ಪತ್ರ ಬರೆದಿದ್ದು, ತಮ್ಮ ವಿಭಾಗಗಳಲ್ಲಿ ರೈಲು ನಿರ್ವಹಣಾ ಸಾಮರ್ಥ್ಯವನ್ನು ಹೆಚ್ಚಿಸುವಂತೆ ಸೂಚಿಸಿದ್ದಾರೆ.

ನಗರ ಪ್ರದೇಶದಲ್ಲಿ ಮತ್ತು ಸುತ್ತಮುತ್ತಲಿನ ಪ್ರದೇಶದಲ್ಲಿ ಹೊಸ ಟರ್ಮಿನಲ್‌ಗಳನ್ನು ಗುರುತಿಸಲು ಮತ್ತು ನಿರ್ಮಿಸಲು ನಿರ್ದೇಶನ ನೀಡಲಾಗಿದೆ.

***************

ಆಕಾಶವಾಣಿಯ ಜನಪ್ರಿಯ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ ಇದೇ ೨೮ ಭಾನುವಾರ ಬೆಳಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ ಅವರು, ದೇಶ ಮತ್ತು ವಿದೇಶಗಳ ಭಾರತೀಯರನ್ನುದ್ದೇಶಿಸಿ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ.

ಇದು ಮನ್ ಕಿ ಬಾತ್‌ನ ೧೨೯ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮವು ಎಲ್ಲಾ ಆಕಾಶವಾಣಿ ಮತ್ತು ದೂರದರ್ಶನ ವಾಹಿನಿಗಳು, ಆಕಾಶವಾಣಿ ಸುದ್ದಿ ವೆಬ್‌ಸೈಟ್ ಮತ್ತು ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ.

ಇದನ್ನು ಆಕಾಶವಾಣಿ ಜಾಲತಾಣ, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಚೇರಿ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ಚಾನೆಲ್‌ಗಳಲ್ಲಿಯೂ ನೇರ ಪ್ರಸಾರ ಮಾಡಲಾಗುತ್ತದೆ. ಹಿಂದಿ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮವನ್ನು ಪ್ರಸಾರ ಮಾಡಲಾಗುವುದು.

***************

ಕೇರಳಾದ್ಯಂತ ಇಂದು ಮಹಾನಗರ ಪಾಲಿಕೆ ಮೇಯರ್ ಹಾಗೂ ನಗರಸಭೆ ಮತ್ತು ಪುರಸಭೆ ಅಧ್ಯಕ್ಷರ ಆಯ್ಕೆಗೆ ಚುನಾವಣೆ ನಡೆಯಿತು. ರಾಜ್ಯದ ಇತಿಹಾಸದಲ್ಲೇ ಮೊದಲ ಬಾರಿಗೆ ಬಿಜೆಪಿಯ ಅಭ್ಯರ್ಥಿಯೊಬ್ಬರು ಮೇಯರ್ ಆಗಿ ಚುನಾಯಿತರಾದರು.

ತಿರುವನಂತಪುರ ಮಹಾನಗರ ಪಾಲಿಕೆಯ ಮೇಯರ್ ಆಗಿ ಬಿಜೆಪಿಯ ವಿ.ವಿ.ರಾಜೇಶ್ ಆಯ್ಕೆಯಾಗಿದ್ದಾರೆ. ಇದೇ ವೇಳೆ, ಕೊಚ್ಚಿ ಕೊಲ್ಲಮ್ ಮತ್ತು ಕಣ್ಣೂರು ಪಾಲಿಕೆಗಳಲ್ಲಿ ಕಾಂಗ್ರೆಸ್ ನೇತೃತ್ವದ ಯುಡಿಎಫ್‌ನ ಅಭ್ಯರ್ಥಿಗಳು ಮೇಯರ್ ಆಗಿ ಆಯ್ಕೆಯಾಗಿದ್ದಾರೆ.

***************

ಗುಜರಾತ್‌ನ ಕಚ್ ಜಿಲ್ಲೆಯ ವಾಗಡ್‌ನಲ್ಲಿ ಇಂದು ಬೆಳಗಿನ ಜಾವ ಸತತ ಎಂಟು ಭೂಕಂಪಗಳು ಸಂಭವಿಸಿವೆ. ಇಂದು ಮುಂಜಾನೆ ೪.೩೦ರ ಸುಮಾರಿಗೆ ವಾಗಡ್ ಪ್ರದೇಶದಲ್ಲಿ ೪.೬ ತೀವ್ರತೆಯ ಭೂಕಂಪ ಸಂಭವಿಸಿದೆ.

ಮುಂಜಾನೆಯ ನಿದ್ರೆಯಲ್ಲಿದ್ದ ನಾಗರಿಕರು ತಮ್ಮ ಮನೆಗಳಿಂದ ಹೊರ ಬಂದಿದ್ದಾರೆ. ನಂತರ ಸತತವಾಗಿ ೭ ಬಾರಿ ಭೂಕಂಪ ಸಂಭವಿಸಿದೆ. ರಾಪರ್‌ನಿಂದ ವಾಯುವ್ಯಕ್ಕೆ ೨೨ ಕಿಲೋಮೀಟರ್ ದೂರದಲ್ಲಿ ಭೂಕಂಪದ ಕೇಂದ್ರ ಬಿಂದು ದಾಖಲಾಗಿದೆ.

***************

ರಾಜಸ್ಥಾನ ಮತ್ತು ಜಾರ್ಖಂಡ್‌ನ ಗ್ರಾಮೀಣ ಸ್ಥಳೀಯ ಸಂಸ್ಥೆಗಳಿಗೆ ೭೨೩ ಕೋಟಿ ರೂಪಾಯಿಗಳಿಗೂ ಹೆಚ್ಚಿನ ಅನುದಾನವನ್ನು ಬಿಡುಗಡೆ ಮಾಡಿದೆ.

ಪಂಚಾಯತ್ ರಾಜ್ ಸಂಸ್ಥೆಗಳು ಮತ್ತು ಗ್ರಾಮೀಣ ಸ್ಥಳೀಯ ಸಂಸ್ಥೆಗಳನ್ನು ಬಲಪಡಿಸಲು ೧೫ನೇ ಹಣಕಾಸು ಆಯೋಗದ ಅಡಿಯಲ್ಲಿ ಪ್ರಸಕ್ತ ಹಣಕಾಸು ವರ್ಷಕ್ಕೆ ಅನುದಾನ ಬಿಡುಗಡೆ ಮಾಡಲಾಗಿದೆ ಎಂದು ಪಂಚಾಯತ್‌ರಾಜ್ ಸಚಿವಾಲಯ ತಿಳಿಸಿದೆ.

ರಾಜಸ್ಥಾನದ ೩ ಸಾವಿರದ ೮೫೭ ಗ್ರಾಮ ಪಂಚಾಯಿತಿಗಳಿಗೆ ೪೪೮ ಕೋಟಿ ರೂಪಾಯಿಗಳಿಗೂ ಹೆಚ್ಚಿನ ಅನುದಾನ ಬಿಡುಗಡೆ ಮಾಡಲಾಗಿದೆ.

***************

ತಿರುವನಂತಪುರದ ಗ್ರೀನ್‌ಫೀಲ್ಡ್ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಐದು ಪಂದ್ಯಗಳ ಮಹಿಳಾ ಟಿ-೨೦ ಅಂತಾರಾಷ್ಟ್ರೀಯ ಕ್ರಿಕೆಟ್ ಸರಣಿಯ ಮೂರನೇ ಪಂದ್ಯದಲ್ಲಿ ಭಾರತ ಮತ್ತು ಶ್ರೀಲಂಕಾ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ಭಾರತ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

ಮೊದಲು ಬ್ಯಾಟಿಂಗ್ ಮಾಡುತ್ತಿರುವ ಶ್ರೀಲಂಕಾ ಇತ್ತೀಚಿನ ವರದಿ ಬಂದಾಗ ೯.೩ ಓವರ್‌ಗಳಲ್ಲಿ ೪ ವಿಕೆಟ್ ನಷ್ಟಕ್ಕೆ ೪೫ ರನ್ ಮಾಡಿ ಆಡುತ್ತಿದೆ.

*******ಮುಕ್ತಾಯ********